ಬೀಳಗಿ ಕ್ಷೇತ್ರದಲ್ಲಿ ಮುಳುಗಡೆಯಾದ ಭಾಗದ ಜನರಿಗೆ ಸ್ವಂತ ಉದ್ಯೋಗಕ್ಕಾಗಿ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡುವುದು.

1964(2629)

ಶ್ರೀ ಪಾಟೀಲ್ ಜೆ.ಟಿ.(ಬೀಳಗಿ): ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀಳಗಿ ಕ್ಷೇತ್ರದಲ್ಲಿ ಮುಳುಗಡೆಯಾದ ಪ್ರದೇಶದ ಜನರಿಗೆ ಸ್ವಂತ ಉದ್ಯೋಗ ಕೈಗೊಳ್ಳಲು ಎರಡು ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಿರುವುದು ನಿಜವಲ್ಲವೆ; ಮಾಡಿದ್ದು ಗಮನಕ್ಕೆ ಇದೆಯೇ;

ಆ) ಈ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲು ಕೈಗೊಳ್ಳಲಾದ ಕ್ರಮವೇನು; ಕೈಗೊಂಡಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಎಸ್.ಆರ್.ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು):

ಅ) ಇಲಾಖೆಯ ವತಿಯಿಂದ ಯಾವುದೇ ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಿಲ್ಲ.

ಆ) ಆನ್ವಯವಾಗುವುದಿಲ್ಲ.

ಬೀಳಗಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ : ಪಂಗಡದವರ ಹಾಸ್ಟೆಲ್‌ಗಳನ್ನು ಹೆಚ್ಚಿಸುವ ಬಗ್ಗೆ.

1965(2631)

ಪಾಟೀಲ್ ಜೆ.ಟಿ.(ಬೀಳಗಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಿಂದ ಬಾಗಲಕೋಟೆ ಜಿಲ್ಲಾ ಪಂಚಾಯತ್ ಮುಖಾಂತರ ಹಾಸ್ಟೆಲ್‌ಗಳಿಗೆ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಲು ಸಲ್ಲಿಸಿದ ಕೋರಿಕೆ ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಈ ವರ್ಷದಿಂದಾದರೂ ಹಾಸ್ಟೆಲುಗಳಿಗೆ ವಿದ್ಯಾರ್ಥಿಗಳ